**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್ ಬಾಬು ಇವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ.**

**ಪ್ರಶ್ನೆ:**

ಕರ್ನಾಟಕದಲ್ಲಿ ಕನ್ನಡದ ಭಾಷೆ ನೆಲ ಜಲ ಸಂರಕ್ಷಣೆಗೆ ಹಲವಾರು ಸಂಘಟನೆಗಳು ಹಲವಾರು ವರ್ಷಗಳಿಂದ ಹೋರಾಟ ಮಾಡುತ್ತಿವೆ. ಇಂತಹ ಸಂಘಟನೆಗಳಿಗೆ ಸ್ಪೂರ್ತಿದಾಯಕವಾಗಿ ಬೆಂಬಲ ನೀಡಬೇಕಾಗಿರುವುದು ಸರ್ಕಾರದ ಕರ್ತವ್ಯವಾಗಿರುತ್ತದೆ. ಕನ್ನಡ ಚಳುವಳಿ ನಾಯಕರಾದ ಮತ್ತು ಮಾಜಿ ಶಾಸಕರಾದ ವಾಟಾಳ್ ನಾಗರಾಜ್, ಮಾಜಿ ಶಾಸಕರಾದ ಜಿ.ನಾರಾಯಣ್ ಕುಮಾರ್ ರವರ ಕನ್ನಡ ಚಳುವಳಿ ಕೇಂದ್ರ, ಕನ್ನಡ ಹೋರಾಟಗಾರರಾದ ನಾರಾಯಣಗೌಡರವರ ರಕ್ಷಣಾ ವೇದಿಕೆ, ಪ್ರವೀಣ್ ಶೆಟ್ಟಿ ರವರ ರಕ್ಷಣಾ ವೇದಿಕೆ, ಕನ್ನಡ ಸಾಹಿತ್ಯ ಪರಿಷತ್ತು ಸಹಿತವಾಗಿ ಅನೇಕ ಜನಪರ ಸಂಘಟನೆಗಳು ಕನ್ನಡ ಪರವಾಗಿ ನಿರಂತರ ಹೋರಾಟ ಮಾಡುತ್ತಿವೆ. ಅಂತಹ ಸಂಘಟನೆಗಳಿಗೆ ಎಲ್ಲ ರೀತಿಯ ಸಹಕಾರ ಮತ್ತು ಬೆಂಬಲ ನೀಡುವುದು ಕರ್ನಾಟಕ ರಾಜ್ಯ ಸರ್ಕಾರದ ಕರ್ತವ್ಯವಾಗಿರುತ್ತದೆ. ಕನ್ನಡಪರ ಚಟುವಟಿಕೆಗಳಿಗೆ ಪೂರಕವಾಗಿ, ಕನ್ನಡದ ಆಶಯಗಳಿಗೆ ಬೆಂಬಲವಾಗಿ ಕೇಂದ್ರ ಸ್ಥಾನ ಬೆಂಗಳೂರು ಸಹಿತವಾಗಿ ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ಇಂಥ ಸಂಘಟನೆಗಳಿಗೆ ಭೂಮಿ ಹಂಚಿಕೆ ಮತ್ತು ವಾರ್ಷಿಕ ಅನುದಾನ/ಸಹಾಯಧನ ಹಂಚಿಕೆ ಮಾಡಬೇಕಾಗಿರುತ್ತದೆ. ಈ ಸಂಬಂಧ ಕರ್ನಾಟಕ ರಾಜ್ಯ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಹೇಳಿಕೆ:**

ಕನ್ನಡದ ಭಾಷೆ ನೆಲ ಜಲ ಸಂರಕ್ಷಣೆಗೆ ಹಲವಾರು ಸಂಘಟನೆಗಳು ಹಲವಾರು ವರ್ಷಗಳಿಂದ ಹೋರಾಟ ಮಾಡುತ್ತಿದ್ದು, ಇವು ಶಾಶ್ವತ ಅನುದಾನಿತ ಸಂಸ್ಥೆಗಳಾಗಿರುವುದಿಲ್ಲ. ಸಂಘ-ಸಂಸ್ಥೆಗಳು ಅನುದಾನ ಕೋರಿದಾಗ ಪರಿಸೀಲಿಸಿ ನಂತರ ಅನುದಾನ ಮಂಜೂರು ಮಾಡಲಾಗುತ್ತದೆ. ಆದರೆ ಹೋರಾಟ ಮಾಡುವ ಸಂಘ-ಸಂಸ್ಥೆಗಳಿಗೆ ಭೂಮಿ ಮಂಜೂರು ಮಾಡುವ ಯೋಜನೆಯು ಇಲಾಖೆಯ ನಿಯಮಾವಳಿಗಳನ್ವಯ ಅನ್ವಯವಾಗುವುದಿಲ್ಲ.

ಶ್ರೀ ವಾಟಾಳ್ ನಾಗರಾಜ್ ಅವರು ಕನ್ನಡ ರಾಜ್ಯೋತ್ಸವ ಸಮಿತಿಯ ವತಿಯಿಂದ ಪ್ರತಿ ವರ್ಷ ಆಯೋಜಿಸುವ ರಾಜ್ಯೋತ್ಸವ ಸಮಾರಂಭಕ್ಕೆ ಸದರಿಯವರು ಕೋರಿಕೆಯ ಮೇರೆಗೆ ಪರಿಶೀಲಿಸಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಸಂಸ್ಥೆಯ ವತಿಯಿಂದ 2024ನೇ ಸಾಲಿನಲ್ಲಿ ಆಯೋಜಿಸಿರುವ 62 ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭಕ್ಕೆ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 381 ಕಸಧ 2025, ದಿನಾಂಕ:11.11.2025ರನ್ವಯ ರೂ.1.00 ಕೋಟಿ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ.

ಶ್ರೀ ನಾರಾಯಣಗೌಡರು, ಅಧ್ಯಕ್ಷರು, ಕರ್ನಾಟಕ ರಕ್ಷಣಾ ವೇದಿಕೆ ಇವರ ಕೋರಿಕೆಯ ಮೇರೆಗೆ ಪರಿಶೀಲಿಸಿ ಸಂಸ್ಥೆಯ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಆಯೋಜಿಸಿರುವ "ಕರ್ನಾಟಕ ಜನಪದರ ಮಹಾಸಂಗಮ, ಸಂಭ್ರಮ" ಕಾರ್ಯಕ್ರಮಕ್ಕೆ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 259 ಕಸಧ 2025 ದಿನಾಂಕ:21.08.2025ರನ್ವಯ ರೂ.15.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ.

ರಾಜ್ಯಾದ್ಯಂತ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಧನಸಹಾಯ ನೀಡಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಈ ಯೋಜನೆಯಡಿ ಸೇವಾಸಿಂಧು ಮುಖಾಂತರ ದಿನಾಂಕ: 01.12.2025 ರಿಂದ 30.12.2025 ರವರೆಗೆ ಕಾಲಾವಕಾಶ ನೀಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಂಖ್ಯೆ: ಕಸಂವಾ 110 ಕವಿಸ 2025

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು